# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1351 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ನ್ಯಾಯಬೆಲೆ ಅಂಗಡಿಗಳು ಕಾರ್ಯ ನಿರ್ವಹಿಸುತ್ತಿವೆ; | ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು 158 ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ. |
| ಆ | ಕಳೆದ ಒಂದು ವರ್ಷದಲ್ಲಿ ಸರ್ಕಾರದಿಂದ ವಿತರಿಸಲಾಗುವ ಆಹಾರ ಧಾನ್ಯಗಳಲ್ಲಿ ಕಡಿಮೆ ತೂಕ/ಮೋಸ ಕುರಿತು ನೀಡಲಾಗಿರುವ ದೂರುಗಳ ಸಂಖ್ಯೆ ಎಷ್ಟು; | ಕಳೆದ 01 ವರ್ಷದಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು 07 ನ್ಯಾಯಬೆಲೆ ಅಂಗಡಿಗಳ ವಿರುದ್ಧ ದೂರುಗಳು ಸ್ವೀಕೃತವಾಗಿರುತ್ತವೆ. |
| ಇ | ಕಳೆದ ಒಂದು ವರ್ಷದಲ್ಲಿ ಎಷ್ಟು ಅಂಗಡಿಗಳ ಮೇಲೆ ಪರಿಶೀಲನೆ/ಶಿಸ್ತು ಕ್ರಮ ಕೈಗೊಳ್ಳಲಾಗಿದೆ; | ಕಳೆದ ಒಂದು ವರ್ಷದಲ್ಲಿ 215 ನ್ಯಾಯಬೆಲೆ ಅಂಗಡಿಗಳ ಪರಿಶೀಲನೆ ತಪಾಸಣೆ ಮಾಡಲಾಗಿದ್ದು, 03 ನ್ಯಾಯಬೆಲೆ ಅಂಗಡಿಗಳ ಪ್ರಾಧಿಕಾರವನ್ನು ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ, 2016 ರನ್ವಯ ಅಮಾನತ್ತುಗೊಳಿಸಲಾಗಿರುತ್ತದೆ. |
| ಈ | ನ್ಯಾಯಬೆಲೆ ಅಂಗಡಿಗಳ ಡಿಜಿಟಲ್ ಮಾನಿಟರಿಂಗ್ ವ್ಯವಸ್ಥೆ ಪರಿಣಾಮಕಾರಿಯಾಗಿ ಜಾರಿಯಲ್ಲಿದೆಯೇ; (ವಿವರಗಳನ್ನು ನೀಡುವುದು) | ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಎಲೆಕ್ಟ್ರಾನಿಕ್ ತೂಕಮಾಪನ ಯಂತ್ರಗಳನ್ನು e-PoS ಉಪಯೋಗಿಸುತ್ತಿದ್ದು ಪಡಿತರ ಚೀಟಿದಾರರ ಬಯೋಮೆಟ್ರಿಕ್ ಪಡೆದು ಪಡಿತರವನ್ನು ವಿತರಣೆ ಮಾಡಲಾಗುತ್ತಿದೆ. ಬಯೋಮೆಟ್ರಿಕ್ ನೀಡಲು ಸಾಧ್ಯವಾಗದ ಪಡಿತರ ಚೀಟದಾರರ ಐರೀಸ್ ಸ್ಕ್ಯಾನರ್ ಬಳಸಿ ಪಡಿತರ ವಿತರಣೆ ಮಾಡಲು ಕ್ರಮವಹಿಸಲಾಗಿರುತ್ತದೆ.<br>ಮುಂದುವರೆದು, ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಏಕ ರೂಪದ Electronics Weighing Machine ಅಳವಡಿಸಿ e-POS ಸಂಯೋಜಿಸಲು ಕ್ರಮವಹಿಸಲಾಗುತ್ತಿದೆ. |

ಇ- ಆನಾಸ 33 ಆನಾಸ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು